# ಮಂಗಳೂರು ವಿಶ್ವವಿದ್ಯಾನಿಲಯ

**ದಿನಾಂಕ 18.02.2025ರಂದು ಪೂರ್ವಾಹ್ನ ಗಂಟೆ 10.30ಕ್ಕೆ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಸಿಂಡಿಕೇಟು ಸಭಾಂಗಣದಲ್ಲಿ ನಡೆದ ಸಿಂಡಿಕೇಟಿನ 2025ನೇ ಸಾಲಿನ ಪ್ರಥಮ ವಿಶೇಷ ಸಭೆಯ ನಡವಳಿಗಳು.**

**ಉಪಸ್ಥಿತರು :**

| | | | |
|---|---|---|---|
| 1. | ಪ್ರೊ ಪಿ. ಎಲ್.ಧರ್ಮ<br>ಕುಲಪತಿಗಳು | ಅಧ್ಯಕ್ಷರು | |
| 2. | ಪ್ರೊ. ಪರಿಣಿತ<br>ಡೀನರು, ಕಲಾ ನಿಕಾಯ | ಸದಸ್ಯರು | |
| 3. | ಡಾ ಎಸ್.ಬಿ ಎಂ. ಪ್ರಸನ್ನ | ಸದಸ್ಯರು | |
| 4. | ಡಾ ಕೆ.ಸಿ. ಮಹದೇಶ | ಸದಸ್ಯರು | |
| 5. | ಡಾ. ಶಂಕರಮೂರ್ತಿ ಎಚ್.ಕೆ. | ಸದಸ್ಯರು | |
| 6. | ಶ್ರೀ ಸುರೇಶ್ ಕುಮಾರ್ ಬಿ. ನಾವೂರು | ಸದಸ್ಯರು | |
| 7. | ಶ್ರೀ. ಸಿ.ಎ. ನಿತಿನ್ ಜೆ ಶೆಟ್ಟಿ | ಸದಸ್ಯರು | |
| 8. | ಶ್ರೀಮತಿ ಜೂಡಿತ್ ಮೆಂಡೋನ್ಸ | ಸದಸ್ಯರು | |
| 9. | ಶ್ರೀ ರಘುರಾಜ್ | ಸದಸ್ಯರು | |
| 10. | ಶ್ರೀ ಅಚ್ಯುತ ಗಟ್ಟಿ | ಸದಸ್ಯರು | |
| 11. | ಶ್ರೀ ಮಹಮ್ಮದ್ ಸವಾದ್ | ಸದಸ್ಯರು | ಆನ್ ಲೈನ್ ಮೂಲಕ |
| 12. | ಪ್ರೊ ಹೆಚ್. ದೇವೆಂದ್ರಪ್ಪ<br>ಕುಲಸಚಿವರು (ಪರೀಕ್ಷಾಂಗ) | ಸದಸ್ಯರು | |
| 13. | ಪ್ರೊ ಸಂಗಪ್ಪ ವೈ.<br>ಹಣಕಾಸು ಅಧಿಕಾರಿ (ಪ್ರಭಾರ) | ವಿಶೇಷ ಆಹ್ವಾನಿತರು | |
| 14. | ಶ್ರೀ ಕೆ. ರಾಜು ಮೊಗವೀರ, ಕೆ.ಎ.ಎಸ್.<br>ಕುಲಸಚಿವರು (ಆಡಳಿತ) | ಸದಸ್ಯ ಕಾರ್ಯದರ್ಶಿ | |

**ಅನುಪಸ್ಥಿತರು:**

| | | |
|---|---|---|
| 1. | ಡಾ. ರಾಮೇಗೌಡ ಎಂ.<br>ಜಂಟಿ ನಿರ್ದೇಶಕರು (ಕಾಲೇಜು ಶಿಕ್ಷಣ ಆಯುಕ್ತರ ಪರವಾಗಿ) | ಸದಸ್ಯರು |
| 2. | ಡಾ. ಸಂದೇಶ್ ಕೆ.ಎಸ್.,<br>(ವೈದ್ಯಕೀಯ ಶಿಕ್ಷಣ ನಿರ್ದೇಶಕರ ಪರವಾಗಿ) | ಸದಸ್ಯರು |

## ಪ್ರಾರಂಭಿಕ

ಪ್ರಾರಂಭದಲ್ಲಿ ಕುಲಸಚಿವರು ಸಭಾಧ್ಯಕ್ಷರಾದ ಮಾನ್ಯ ಕುಲಪತಿಯವರನ್ನು ಹಾಗೂ ಎಲ್ಲಾ ಸಿಂಡಿಕೇಟು ಸದಸ್ಯರುಗಳನ್ನು ಸಭೆಗೆ ಸ್ವಾಗತಿಸಿದರು.

## ಪ್ರಾಸ್ತಾವಿಕ

ಮಾನ್ಯ ಕುಲಪತಿಯವರು ಮತ್ತೊಮ್ಮೆ ಎಲ್ಲರನ್ನು ಸ್ವಾಗತಿಸಿ, ಸಭೆಯನ್ನು ಪ್ರಾರಂಭಿಸಿದರು.

ಈ ಕೆಳಗಿನ ವಿಷಯಗಳನ್ನು ಸಭೆಯ ಗಮನಕ್ಕೆ ತರಲಾಯಿತು.

1. ದ.ಕ. ಜಿಲ್ಲಾ 27ನೇ ಕನ್ನಡ ಸಾಹಿತ್ಯ ಸಮ್ಮೇಳನವು ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿ 2025ರ ಫೆಬ್ರವರಿ 21 ಮತ್ತು 22 ರಂದು ನಡೆಯಲಿದ್ದು, ಸಾಹಿತ್ಯ ಸಮ್ಮೇಳನದ ಯಶಸ್ಸಿಗೆ ಅಗತ್ಯವಿರುವ ಎಲ್ಲಾ ರೀತಿಯ ಪೂರ್ವ ಸಿದ್ಧತೆಗಳನ್ನು ಮಾಡಿಕೊಳ್ಳಲಾಗುತ್ತಿದೆ ಎಂಬುದಾಗಿ ಸಭೆಗೆ ತಿಳಿಸಲಾಯಿತು.
2. Bridgewater State University (BSU), Massachusetts, USA ಇವರ ಸಹಯೋಗದೊಂದಿಗೆ ಸಂಶೋಧನೆ ಹಾಗೂ ಇತರ ಶೈಕ್ಷಣಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಪ್ರಯುಕ್ತ ಒಡಂಬಡಿಕೆ ಮಾಡಿಕೊಂಡಿರುವುದನ್ನು ಸಭೆಗೆ ತಿಳಿಸಲಾಯಿತು.
3. ವಿಶ್ವವಿದ್ಯಾನಿಲಯದ 43ನೇ ವಾರ್ಷಿಕ ಘಟಿಕೋತ್ಸವವು 2025ರ ಮಾರ್ಚ್ 29ರಂದು ಪೂರ್ವಾಹ್ನ 11.00 ಗಂಟೆಗೆ ನಿಗದಿಯಾಗಿರುವುದನ್ನು ಸಭೆಯ ಗಮನಕ್ಕೆ ತರಲಾಯಿತು. ವಿಶ್ವವಿದ್ಯಾನಿಲಯದ ಗೌರವ ಡಾಕ್ಟರೇಟ್ ಗೆ ಈಗಾಗಲೇ 12 ಅರ್ಜಿಗಳಿದ್ದು, ಮತ್ತೋರ್ವರಿಂದ ಸ್ವೀಕರಿಸಲಾದ ಅರ್ಜಿಯನ್ನು ಸಿಂಡಿಕೇಟ್ ಸಭೆಗೆ ಮಂಡಿಸಲಾಗಿ, ಗೌರವ ಡಾಕ್ಟರೇಟ್ ಸಲಹಾ ಸಮಿತಿಯ ಪರಿಗಣನೆಗೆ ಶಿಫಾರಸ್ಸು ಮಾಡಲು ಸಿಂಡಿಕೇಟ್ ಸಭೆಯಲ್ಲಿ ನಿರ್ಣಯಿಸಲಾಯಿತು.
4. National Institute of Personnel Management ವತಿಯಿಂದ ಮಂಗಳೂರಿನಲ್ಲಿ ನಡೆದ Vice Chancellor's Conclave ನಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ಪರವಾಗಿ ಮಾನ್ಯ ಕುಲಪತಿಗಳು ಭಾಗವಹಿಸಿದ್ದರು. ಸದರಿ ಸಮ್ಮೇಳನದಿಂದ ಎಂ.ಬಿ.ಎ. ಮತ್ತು ಎಂ.ಕಾಂ. ಕೋರ್ಸುಗಳ Curriculum Design, Technical Support ಹಾಗೂ ವಿದ್ಯಾರ್ಥಿಗಳ Internship ಗೆ ವಿವಿಧ ಸಂಸ್ಥೆಗಳ ಅಗತ್ಯ ನೆರವು ದೊರಕುವುದಾಗಿ ಸಭೆಗೆ ತಿಳಿಸಲಾಯಿತು.
5. ಸ್ನಾತಕೋತ್ತರ ಪರೀಕ್ಷೆಗಳು ಸರಾಗವಾಗಿ ನಡೆಯುತ್ತಿದ್ದು, ವಿದ್ಯಾರ್ಥಿಗಳು ಪೂರ್ಣ ಪ್ರಮಾಣದ ಹಾಜರಾತಿಯೊಂದಿಗೆ ಪರೀಕ್ಷೆ ಬರೆಯುತ್ತಿರುವುದಾಗಿ ಸಭೆಗೆ ತಿಳಿಸಲಾಯಿತು.

6. ಮಂಗಳೂರು ವಿಶ್ವವಿದ್ಯಾನಿಲಯ ಮತ್ತು Infosys Springboard ನ ಸಹಯೋಗದೊಂದಿಗೆ 2025 ಫೆಬ್ರವರಿ 13 ರಿಂದ 18ರವರೆಗೆ ಶಿಕ್ಷಕರಿಗೆ Faculty Development Programme ಕಾರ್ಯಗಾರ ನಡೆದಿದ್ದು ಕಂಪ್ಯೂಟರ್ ಸಂಬಂಧಿತ ಹಾಗೂ ಕೃತಕ ಬುದ್ಧಿಮತ್ತೆ (A.I.) ತಂತ್ರಜ್ಞಾನ ಬಳಕೆ ಹಾಗೂ ಇತರ ವಿಷಯಗಳ ಕುರಿತು ತರಭೇತಿ ನೀಡಿರುವ ಬಗ್ಗೆ ಸಭೆಗೆ ತಿಳಿಸಲಾಯಿತು.

**I. ನಡವಳಿಗಳ ದೃಢೀಕರಣ**

**ದಿನಾಂಕ 17.01.2025ರಂದು ನಡೆದ ಸಿಂಡಿಕೇಟಿನ 2025ನೇ ಸಾಲಿನ ಪ್ರಥಮ ಸಾಮಾನ್ಯ ಸಭೆಯ ನಡವಳಿಯ ದೃಢೀಕರಣ**

**- ದೃಢೀಕರಿಸಲಾಯಿತು -**

**II. ಈ ಸಿಂಡಿಕೇಟು ಸಭೆಗೆ ಮಂಡಿಸಲಿರುವ ಕಾರ್ಯಸೂಚಿಗಳು.**

| | |
|---|---|
| ಕಾರ್ಯಸೂಚಿ ಸಂಖ್ಯೆ: | ಹಣಕಾಸು:ವಿ.ಸ.1:1 (2025) |
| ವಿಷಯ: | ಉಡುಪಿ ಜಿಲ್ಲೆ ಕಾಪು ತಾಲೂಕಿನ ಬೆಳಪುವಿನಲ್ಲಿ ನಿರ್ಮಿಸಲಾಗುತ್ತಿರುವ ಸ್ನಾತಕೋತ್ತರ ಅಧ್ಯಯನ ಮತ್ತು ಅತ್ಯಾಧುನಿಕ ಸಂಶೋಧನಾ ಕೇಂದ್ರ ಸ್ಥಾಪನೆಗೆ ಸರಕಾರದಿಂದ ಬಿಡುಗಡೆಯಾದ ಅನುದಾನದ ಆದೇಶಗಳಲ್ಲಿ ದಾಖಲಿಸಿರುವ ಷರತ್ತುಗಳ ಪಾಲನೆ ಬಗ್ಗೆ. |
| **ನಿರ್ಣಯ:** | ಬೆಳಪು ಯೋಜನೆಗೆ ಸಂಬಂಧಿಸಿದಂತೆ, ಸರ್ಕಾರವು ಒದಗಿಸಿದ ಅನುದಾನವನ್ನು ಉದ್ದೇಶಿತ ಕಾರ್ಯಕ್ಕೆ ಮಾತ್ರ ಬಳಸಲು ಸರ್ಕಾರದ ನಿರ್ದೇಶನವಿದ್ದರೂ ಕೂಡಾ, ಸರ್ಕಾರದ ಆದೇಶ ಉಲ್ಲಂಘನೆ ಮಾಡಿ ಅಂತರಾಷ್ಟ್ರೀಯ ಹಾಸ್ಟೆಲ್ ಮತ್ತು ಇತರ ಚಟುವಟಿಕೆಗಳಿಗೆ ಬಳಸಿರುವುದು ಕಡತದಲ್ಲಿರುವ ದಾಖಲೆಗಳಿಂದ ಕಂಡುಬಂದಿರುತ್ತದೆ. ಈ ವಿಷಯದ ಬಗ್ಗೆ ಮಾನ್ಯ ಸಿಂಡಿಕೇಟು ಗಂಭೀರವಾಗಿ ಪರಿಗಣಿಸಿ ಆ ಸಂದರ್ಭದಲ್ಲಿ ಕಾರ್ಯ ನಿರ್ವಹಿಸಿರುವ ಕುಲಸಚಿವರು ಹಾಗೂ ಹಣಕಾಸು ಅಧಿಕಾರಿಯವರಿಗೆ ಕಾರಣ ಕೇಳಿ ನೋಟೀಸನ್ನು ಜ್ಯಾರಿ ಮಾಡಿ, ಹದಿನೈದು ದಿನಗಳ ಒಳಗೆ ಪ್ರತಿಕ್ರಿಯೆ ನೀಡುವಂತೆ ಸೂಚಿಸಲು ನಿರ್ಣಯಿಸಲಾಯಿತು. ಅವಶ್ಯಕತೆಗೆ ಅನುಸಾರವಾಗಿ ಮುಂದೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಲು ನಿರ್ಣಯಿಸಲಾಯಿತು. |

ಕಾರ್ಯಸೂಚಿ ಸಂಖ್ಯೆ: ಕಾನೂನು ಘಟಕ:ವಿ.ಸ.1:2 (2025)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯವು ಹೂಡಿರುವ ರಿಟ್ ಅರ್ಜಿ ಸಂಖ್ಯೆ 22670/ 2024ಕ್ಕೆ ಸಂಬಂಧಿಸಿದಂತೆ ವಿಶ್ವವಿದ್ಯಾನಿಲಯ ಪರವಾಗಿ ವಾದಿಸಲು ಉಚ್ಚ ನ್ಯಾಯಾಲಯದಲ್ಲಿ ಹಿರಿಯ ನ್ಯಾಯವಾದಿ (Senior Counsel) ಯವರನ್ನು ನೇಮಿಸಿದ ಬಗ್ಗೆ ಘಟನೋತ್ತರ ಮಂಜೂರಾತಿ ನೀಡಲು ಮತ್ತು ಹಿರಿಯ ನ್ಯಾಯವಾದಿಗಳ ಬಿಲ್ಲು ಮೊತ್ತ ರೂ. 5 ಲಕ್ಷ ಪಾವತಿಗೆ ಅನುಮತಿ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ವಿಷಯ: ಶೈಕ್ಷಣಿಕ ವರ್ಷ 2025-26ನೇ ಸಾಲಿಗೆ ಕಾಲೇಜುಗಳ ಸಂಯೋಜನೆಯ ಮಂಜೂರಾತಿಗೆ ಸಂಬಂಧಿಸಿದಂತೆ ಚರ್ಚೆ.

**ನಿರ್ಣಯ:** ಶೈಕ್ಷಣಿಕ ವರ್ಷ 2025-26ನೇ ಸಾಲಿಗೆ ಕಾಲೇಜುಗಳ ಸಂಯೋಜನೆಗೆ ಸಂಬಂಧಪಟ್ಟಂತೆ ಸ್ಥಳೀಯ ಪರಿಶೀಲನಾ ಸಮಿತಿಗೆ ಸರ್ಕಾರದ ಸುತ್ತೋಲೆಯಂತೆ ಸಿಂಡಿಕೇಟು ಸದಸ್ಯರುಗಳನ್ನು ಸೇರ್ಪಡೆಗೊಳಿಸದಿರಲು ನಿರ್ಣಯಿಸಿರುವುದಾಗಿ ಮಾನ್ಯ ಕುಲಪತಿಗಳು ಈ ಹಿಂದಿನ ಸಿಂಡಿಕೇಟು ಸಭೆಯಲ್ಲಿ ತಿಳಿಸಿರುವುದರಿಂದ, ಸದ್ರಿ ನಿರ್ಣಯಕ್ಕೆ ಸಿಂಡಿಕೇಟು ಸದಸ್ಯರುಗಳು ಅಸಮ್ಮತಿ ವ್ಯಕ್ತಪಡಿಸಿ ಕಾಲೇಜುಗಳ ಸಂಯೋಜನ ವರದಿಗೆ ಸಹಮತ ವ್ಯಕ್ತಪಡಿಸಿರುವುದಿಲ್ಲ. ಈ ಸಂಬಂಧ ಸ್ಥಳೀಯ ವಿಚಾರಣಾ ಸಮಿತಿಯ ವರದಿಗಳಲ್ಲಿ ಹಾಗೂ ಶೈಕ್ಷಣಿಕ ಮಂಡಳಿಯ ಶಿಫಾರಸ್ಸಿನಲ್ಲಿ ಯಾವುದೇ ರೀತಿಯ ನಕರಾತ್ಮಕ ಅಂಶಗಳು ಕಂಡು ಬರದ ಕಾರಣ ಮಾನ್ಯ ಕುಲಪತಿಯವರ ನಿರ್ದೇಶನದಂತೆ, ಸಂಯೋಜಿತ ಕಾಲೇಜುಗಳಲ್ಲಿ ಅಧ್ಯಯನ ಮಾಡುವ ವಿದ್ಯಾರ್ಥಿಗಳ ಭವಿಷ್ಯದ ಹಿತದೃಷ್ಠಿಯಿಂದ ಹಾಗೂ ಕಾಲೇಜು ಮತ್ತು ವಿಶ್ವವಿದ್ಯಾನಿಲಯದ ನಡುವಿನ ಶೈಕ್ಷಣಿಕ ಸಂಬಂಧಗಳನ್ನು ವೃದ್ಧಿಸಿಕೊಳ್ಳುವ ಉದ್ದೇಶದಿಂದ ಕಾಲೇಜುಗಳ ಸಂಯೋಜನಾ ವರದಿಗಳನ್ನು ಸರ್ಕಾರಕ್ಕೆ ಕಳುಹಿಸಿಕೊಡಲು ನಿರ್ಣಯಿಸಲಾಯಿತು.

**ಕುಲಸಚಿವರು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.**

| ಸಹಿ/- | ಸಹಿ/- |
|---|---|
| **ಕುಲಸಚಿವರು** | **ಕುಲಪತಿಯವರು** |